# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 917

ಸದಸ್ಯರ ಹೆಸರು : ಶ್ರೀ ಗೋವಿಂದರಾಜು

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 24.07.2024

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಶಕ್ತಿ ಯೋಜನೆ ಪ್ರಾರಂಭವಾದ ದಿನದಿಂದ ಇದುವರೆಗೂ ನಾಲ್ಕು ಸಾರಿಗೆ ಸಂಸ್ಥೆಗಳಿಂದ ಎಷ್ಟು ಮಹಿಳಾ ಪ್ರಯಾಣಿಕರು ಪ್ರಯಾಣ ಮಾಡಿರುತ್ತಾರೆ; | ಶಕ್ತಿ ಯೋಜನೆ ಪ್ರಾರಂಭವಾದ ದಿನದಿಂದ ಜೂನ್-2024ರವರೆಗೆ ನಾಲ್ಕು ಸಾರಿಗೆ ಸಂಸ್ಥೆಗಳ ಬಸ್‌ಗಳಲ್ಲಿ ಪ್ರಯಾಣಿಸಿದ ಮಹಿಳಾ ಪ್ರಯಾಣಿಕರ ಸಂಖ್ಯೆ ಕೆಳಗಿನಂತಿರುತ್ತದೆ:<br><br>**ಸಂಸ್ಥೆ** — **ಮಹಿಳೆಯರ ಸಂಖ್ಯೆ ಕೋಟಿಗಳಲ್ಲಿ**<br>ಕ.ರಾ.ರ.ಸಾ.ನಿ. — 74.39<br>ಬೆಂ.ಮ.ಸಾ.ಸಂ — 75.96<br>ವಾ.ಕ.ರ.ಸಾ.ಸ — 55.27<br>ಕ.ಕ.ರ.ಸಾ.ನಿ. — 35.54 |
| ಆ | ಮಹಿಳೆಯರ ಟಿಕೆಟ್ ಮೊತ್ತವನ್ನು ರಾಜ್ಯ ಸರ್ಕಾರವು ಬಿ.ಎಂ.ಟಿ.ಸಿ.ಗೆ ಪೂರ್ಣ ಪ್ರಮಾಣದಲ್ಲಿ ಪಾವತಿಸದೆ ಕೋಟ್ಯಾಂತರ ರೂ. ಬಾಕಿ ಉಳಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಸರ್ಕಾರದ ಗಮನಕ್ಕೆ ಬಂದಿದೆ. |
| ಇ | ಹಾಗಿದ್ದಲ್ಲಿ, ಎಷ್ಟು ಬಾಕಿ ಉಳಿಸಿಕೊಂಡಿದೆ ಹಾಗೂ ಬಾಕಿ ಉಳಿಸಿಕೊಳ್ಳಲು ಇರುವ ಕಾರಣಗಳೇನು; | ಬೆಂಗಳೂರು ಮಹಾ ನಗರ ಸಾರಿಗೆ ಸಂಸ್ಥೆಗೆ ಶಕ್ತಿ ಯೋಜನೆಯಡಿ ದಿನಾಂಕ:11-06-2023ರಿಂದ ಜೂನ್-2024ರವರೆಗೆ ಬಸ್‌ಗಳಲ್ಲಿನ ಉಚಿತ ಪ್ರಯಾಣಕ್ಕೆ ಸರ್ಕಾರದಿಂದ ಭರಿಸಲಾದ ಮೊತ್ತ ಹಾಗೂ ಮರುಪಾವತಿಸಲು ಬಾಕಿ ಮೊತ್ತದ ವಿವರ ಕೆಳಕಂಡಂತಿದೆ:-<br><br>**(ರೂ.ಕೋಟಿಗಳಲ್ಲಿ)**<br><br>**ಬಿಡುಗಡೆಗೊಳಿಸಿರು ಮೊತ್ತ** — **ಬಾಕಿ ಮೊತ್ತ**<br>765.81 — 228.95<br><br>2023-24ನೇ ಸಾಲಿನ ಆಯವ್ಯಯದಲ್ಲಿ ನಿಗದಿಪಡಿಸಲಾಗಿದ್ದ ಅನುದಾನವನ್ನು ಸಂಸ್ಥೆಗೆ ಬಿಡುಗಡೆ ಮಾಡಲಾಗಿದೆ ಮತ್ತು 2024-25ನೇ ಸಾಲಿನಲ್ಲಿ ನಿಗದಿಪಡಿಸಿರುವ ಅನುದಾನವನ್ನು ಹಂತಹಂತವಾಗಿ ಮಾಹೆವಾರು ಬಿಡುಗಡೆಗೊಳಿಸಲಾಗುತ್ತಿದೆ. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಈ | ಸರ್ಕಾರವು ಈವರೆಗೆ ಬಾಕಿ ಮರುಪಾವತಿಸದಿರುವುದರಿಂದ ಸಂಸ್ಥೆಯು ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಶಕ್ತಿ ಯೋಜನೆ ಜಾರಿಗೆ ತಂದಿರುವ 2023-24ನೇ ಸಾಲಿನಲ್ಲಿ ಸರ್ಕಾರದಿಂದ ಬೆಂ.ಮ.ಸಾ.ಸಂಸ್ಥೆಗೆ ನೌಕರರ ಭವಿಷ್ಯ ನಿಧಿ, ಇನ್ನಿತರೆ ಶಾಸನಬದ್ಧ ಪಾವತಿಗಾಗಿ ರೂ.253.295 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ ಹಾಗೂ ಸದರಿ ಸಾಲಿನಲ್ಲಿ ಸಂಸ್ಥೆಯು ಸರ್ಕಾರಕ್ಕೆ ಪಾವತಿಸಬೇಕಾಗಿದ್ದ ರೂ.119.88 ಕೋಟಿಗಳ ಪಾವತಿಯಿಂದ ವಿನಾಯಿತಿ ನೀಡಲಾಗಿರುತ್ತದೆ.<br><br>2024-25ನೇ ಸಾಲಿನಲ್ಲಿ ನೌಕರರ ಭವಿಷ್ಯ ನಿಧಿ, ಇನ್ನಿತರೆ ಶಾಸನಬದ್ಧ ಪಾವತಿಗಾಗಿ ರೂ.53.295 ಕೋಟಿಗಳನ್ನು ಒದಗಿಸಲಾಗಿದೆ.<br><br>ಮುಂದುವರೆದು, ಆಯವ್ಯಯದಲ್ಲಿ ಅಗತ್ಯ ಅನುದಾನ ದೊರಕಿದ ನಂತರ ಬಾಕಿ ಮರುಪಾವತಿಸಲಾಗುವುದು. |
| ಉ | ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? | |

ಸಂಖ್ಯೆ: ಟಿಡಿ 135 ಟಿಸಿಕ್ಯೂ 2024

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು